# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಟಿ ಪರಶುರಾಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮೋಕಾ ಗ್ರಾಮ ಪಂಚಾಯಿತಿ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ - ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅಸಪ ಸಂಖ್ಯೆ:ಉಪಲೋಕ್/ಜಿಎಲ್‌ಬಿ-2680/2016/ಡಿಆರ್‌ಇ-5 ದಿನಾಂಕ:22.06.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: ದಿನಾಂಕ: 13.06.2017 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

ಈ ದೂರನ್ನು ಶ್ರೀ.ಬಿ. ಈರಪ್ಪ ತಂದೆ ಲೇಟ್ ಮಜ್ಜಿಗೆ ತಿಮ್ಮಪ್ಪ, ಮೋಕಾ ಗ್ರಾಮ ಪಂಚಾಯಿತಿ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ಇವರು ಶ್ರೀ ಟಿ ಪರಶುರಾಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮೋಕಾ ಗ್ರಾಮ ಪಂಚಾಯಿತಿ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ಸಲ್ಲಿಸಿದ್ದಾರೆ.

**ದೂರಿನ ಸಂಕ್ಷಿಪ್ತ ವಿವರ:**

ದೂರುದಾರರ ಸಹೋದರ ಬಿ.ಸಣ್ಣವಂಡ್ರಪ್ಪ ಇವರು ಪಂಚಾಯಿತಿಯಿಂದ ಯಾವುದೇ ಪರವಾನಿಗೆಯನ್ನು ತಗೆದುಕೊಳ್ಳದೇ ಸುಮಾರು 15 ಅಡಿಯಷ್ಟು ಎತ್ತರದ ಕಂಪೌಂಡ್ ವಾಲ್ ಅನ್ನು ನಿರ್ಮಿಸಿದ್ದಾರೆ, ಇದು ಸುಮಾರು 25 ಅಡಿ ಉದ್ದ ಯಾವುದೇ ಬುನಾದಿ ಇಲ್ಲದೇ ಟೊಳ್ಳು ಇಟ್ಟಿಗೆಯಿಂದ ಕಟ್ಟಿರುವುದರಿಂದ ಯಾವುದೇ ಸಮಯದಲ್ಲಿ ಬಿದ್ದು ಹೋಗಬಹುದು ಹಾಗೂ ತಾನು ಪಕ್ಕದ ಮನೆಯಲ್ಲಿ ವಾಸವಾಗಿದ್ದು, ದನ ಕರಗಳಿಗೆ ತೊಂದರೆಯಾಗಬಹುದು, ಪರವಾನಿಗೆ ಇಲ್ಲದೇ ಕಟ್ಟಿರುವ ಕಂಪೌಂಡ್ ಅನ್ನು ತೆರವುಗೊಳಿಸಲು ದಿನಾಂಕ: 09.04.2016 ರಂದು ದೂರನ್ನು ಕೊಟ್ಟಿದ್ದೇನೆ. ವಕೀಲರ ಮುಖಾಂತರ ನೋಟೀಸ್ ಕೊಟ್ಟಿದ್ದೇನೆ, ಆದರೂ ಸಹ ಎದುರುದಾರರು ಯಾವುದೇ ಕ್ರಮವನ್ನು ತೆಗೆದುಕೊಂಡಿಲ್ಲ ಎಂದು ದೂರಿನಲ್ಲಿ ಆಪಾದಿಸಿರುತ್ತಾರೆ.

ಈ ದೂರಿನ ಮೇಲೆ ಎದುರುದಾರರಿಂದ ಆಕ್ಷೇಪಣೆಗಳನ್ನು ಕೇಳಲಾಗಿದೆ. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರ ಶ್ರೀ ಈರಪ್ಪ ಮತ್ತು ಆತನ ತಮ್ಮಂದಿರು 2004 ರಲ್ಲಿ ಈಗಾಗಲೇ ಮನೆ ಕಟ್ಟಿಸಿಕೊಂಡಿದ್ದಾರೆ. ಅರ್ಜಿದಾರರ ತಮ್ಮ ವಂಡ್ರಪ್ಪ ಮನೆಯ ಮುಂದೆ ಆಹಾರ ದಾನ್ಯ ಸಂಗ್ರಹಣ ನಿರ್ಮಿಸಿಕೊಂಡಿದ್ದಾರೆ. ಯಾವುದೇ ಕಂಪೌಂಡ್ ವಾಲ್ ನಿರ್ಮಿಸಿಲ್ಲ. ಶೆಡ್ ನಿರ್ಮಾಣದ ಸಮಯದಲ್ಲಿ ಪಂಚಾಯಿತಿಯ ಪರವಾನಿಗೆಯನ್ನು ಪಡೆದಿಲ್ಲ. ಪಂಚಾಯಿತಿ ವತಿಯಿಂದ ನೋಟೀಸ್ ನೀಡಿ ತೆರವುಗೊಳಿಸಲು ಸೂಚಿಸಲಾಗಿದೆ. ಇದರಲ್ಲಿ ನನ್ನ ಯಾವುದೇ ಹಸ್ತಕ್ಷೇಪ ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

ಎದುರುದಾರರ ಆಕ್ಷೇಪಣೆಗಳ ಮೇಲೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ಅದರಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ಉದ್ದೇಶಪೂರ್ವಕವಾಗಿ ವಾಸ್ತವ ಅಂಶಗಳನ್ನು ಮುಚ್ಚಿಟ್ಟಿದ್ದಾರೆ. ಎದುರುದಾರರಿಗೆ ಕಾನೂನಿನ ಬಗ್ಗೆ ಗೌರವ ಇಲ್ಲ. ಕರ್ತವ್ಯ ಪ್ರಜ್ಞೆ ಹೊಣೆಗಾರಿಕೆ ಮತ್ತು ಜವಾಬ್ದಾರಿ ಇಲ್ಲ. ಎದುರುದಾರರು ನೋಟೀಸ್ ಕೊಟ್ಟಿದ್ದರೂ ಸಹ ಯಾವುದೇ ಕ್ರಮ ತೆಗೆದುಕೊಂಡಿಲ್ಲ. ಆದ್ದರಿಂದ ಎದುರುದಾರರ ವಿರುದ್ಧ ಕ್ರಮ ತೆಗೆದುಕೊಳ್ಳಲು ಕೋರಿಕೊಂಡಿದ್ದಾರೆ.

ಈ ಪ್ರಕರಣದ ಸಂಪೂರ್ಣ ಕಡತವನ್ನು ಪರಿಶೀಲಿಸಿದ್ದೇನೆ. ಎದುರುದಾರರು ದೂರುದಾರರಿಗೆ ಕೊಟ್ಟಿರುವ ನೋಟೀಸ್ ಪ್ರತಿಯಲ್ಲಿ ದಿನಾಂಕ: 18.07.2016 ರಂದು ಸ್ಥಳ ಪರಿಶೀಲನೆಗೆ ಬಂದಾಗ ಪರವಾನಿಗೆ ಪಡೆಯದೇ ಶೆಡ್ ಮತ್ತು ಕಂಪೌಂಡ್ ನಿರ್ಮಿಸಿರುವ ಬಗ್ಗೆ ದೃಢಪಟ್ಟಿದೆ, ಪರಿಶೀಲನೆಯ ಸಮಯದಲ್ಲಿ ಒಬ್ಬರಿಗೊಬ್ಬರು ವಾದವನ್ನು ಮಾಡಿಕೊಂಡಿದ್ದರಿಂದ ಮಾಹಿತಿಯನ್ನು ಪಡೆಯದೇ ವಾಪಸ್ಸು ಬಂದಿರುತ್ತೇನೆ. ಕಂಪೌಂಡ್ ಗೋಡೆ ಮತ್ತು ಶೆಡ್‌ಗಳನ್ನು ತೆರವುಗೊಳಿಸತಕ್ಕದ್ದು ಅಂತ ಯಾರಿಗೆ ನೋಟೀಸ್ ಕೊಟ್ಟಿದ್ದಾರೆ ಎನ್ನುವುದೇ ತಿಳಿಯುತ್ತಿಲ್ಲ. ಇದರ ಪ್ರತಿಯನ್ನು ಮಾತ್ರ ದೂರುದಾರರಿಗೆ ಕೊಟ್ಟಿದ್ದಾರೆ. ಸಣ್ಣವಂತ್ರಪ್ಪ ಇವರು ಹೆಬ್ಬೆರಳು ಗುರುತು ಹಾಕಿ ನೋಟೀಸ್ ತೆಗೆದುಕೊಂಡಿರುವುದು ಕಂಡುಬರುತ್ತದೆ. ದಿನಾಂಕ:25.10.2016 ರಂದು ನೋಟೀಸ್ ಕೊಟ್ಟ ನಂತರ ಎದುರುದಾರರು ಯಾವುದೇ ಕ್ರಮ ತೆಗೆದುಕೊಳ್ಳದೇ ಕರ್ತವ್ಯಲೋಪ ಎಸಗಿದ್ದಾರೆ.

ಒಂದು ಶೆಡ್ ಮತ್ತು ಕಂಪೌಂಡ್ ಗೋಡೆಯನ್ನು ಗ್ರಾಮ ಪಂಚಾಯತ್ ಪರವಾನಿಗೆ ಇಲ್ಲದೇ ನಿರ್ಮಿಸಿಕೊಂಡಿರುವುದು ಸ್ಥಳ ಪರಿಶೀಲನೆಯಿಂದ ದೃಢಪಟ್ಟ ನಂತರವು ಸಹ ಅದನ್ನು ತೆರವುಗೊಳಿಸಲು ಯಾವುದೇ ಕ್ರಮ ಕೈಗೊಳ್ಳದೇ ಎದುರುದಾರರು ಕರ್ತವ್ಯಲೋಪ ಎಸಗಿದ್ದಾರೆ. ಕೇವಲ ನೋಟೀಸ್ ಕೊಡುವುದರಿಂದ ಸಮಸ್ಯೆ ಪರಿಹಾರವಾಗುವುದಿಲ್ಲ. ಪಂಚಾಯತ್ ರಾಜ್ ಅಧಿನಿಯಮದಲ್ಲಿ ತಮಗೆ ಇರುವ ಅಧಿಕಾರವನ್ನು ಎದುರುದಾರರು ಚಲಾಯಿಸದೇ ಹೋದಲ್ಲಿ ಅದು ಸಹ ಕರ್ತವ್ಯಲೋಪವಾಗುತ್ತದೆ. ಆಕ್ಷೇಪಣೆಗಳಲ್ಲಿ ಎದುರುದಾರರು ಸದರಿ ಸಣ್ಣವಂತ್ರಪ್ಪ ಎನ್ನುವವರು ಆಹಾರ ಧಾನ್ಯ ಸಂಗ್ರಹಣೆಗೆ ಶೆಡ್ ನಿರ್ಮಿಸಿದ್ದಾರೆ ಅಂತ ಹೇಳಿದ್ದು, ಸಣ್ಣವಂತ್ರಪ್ಪ ಇವರಿಗೆ ಕೊಟ್ಟ ನೋಟೀಸ್‌ನಲ್ಲಿ ಶೆಡ್ ಮತ್ತು ಕಂಪೌಂಡ್ ಗೋಡೆಯನ್ನು ಅಕ್ರಮವಾಗಿ ನಿರ್ಮಿಸಿರುವುದು ಕಂಡುಬಂದಿದೆ ಅಂತ ಹೇಳಿದ್ದಾರೆ.

ಆದುದರಿಂದ, ಎದುರುದಾರರು ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಾಮಗಳು 1996 ರ ನಿಯಮ 3(i) (ii) (iii) ರಲ್ಲಿ ಹೇಳಿದಂತೆ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಭಾಧ್ಯರಾಗಿರುವುದು ಕಂಡುಬರುವುದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ಎದುರುದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಈ ಹಿನ್ನೆಲೆಯಲ್ಲಿ ಶ್ರೀ ಟಿ ಪರಶುರಾಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮೋಕಾ ಗ್ರಾಮ ಪಂಚಾಯಿತಿ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, ನಾಗರೀಕ ಸೇವಾ (ನಡತೆ) ನಿಯಾಮಗಳು 1996 ರ ನಿಯಮ 3(i) (ii) (iii) ರ ಅಡಿಯಲ್ಲಿ ದುರ್ನಡತೆ/ದುರ್ವತನೆ ಕಂಡು ಬಂದಿರುವುದರಿಂದ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/559/ಗ್ರಾಪಂಕಾ/2017 ಬೆಂಗಳೂರು, ದಿನಾಂಕ-18-07-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಟಿ ಪರಶುರಾಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮೋಕಾ ಗ್ರಾಮ ಪಂಚಾಯಿತಿ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)

ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಪಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಹಿಂದಿರುಗಿಸಿದೆ. ಪುಟ ಸಂಖ್ಯೆ: 1 ರಿಂದ 116).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಳ್ಳಾರಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.
6. ಶ್ರೀ ಟಿ ಪರಶುರಾಮ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಮೋಕಾ ಗ್ರಾಮ ಪಂಚಾಯಿತಿ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
8. ಗಣಕ ಕೋಶ.